**All India Radio: Bangalore**
**National Bulletin In Kannada**
**07.03.2026  19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**07.03.2026  19.35 hrs**

**<>><><*><><<>**

ಮುಖ್ಯಾಂಶಗಳು

೧. ವಾಯು ಸಂಪರ್ಕ ವಿಸ್ತಾರದ ಮೂಲಕ ಸಮಗ್ರ ಅಭಿವೃದ್ಧಿಯ ವೇಗ ಹೆಚ್ಚಳ- ಪ್ರಧಾನಿ ನರೇಂದ್ರ ಮೋದಿ ಅಭಿಮತ

೨. ದೇಶಾದ್ಯಂತ ಅತಿಕ್ರಮಣ ಮತ್ತು ಒಳನುಸುಳುವಿಕೆ ವಿರುದ್ಧ ಕಠಿಣ ಕ್ರಮ ಮುಂದುವರಿಕೆ - ಕೇಂದ್ರ ಗೃಹ ಸಚಿವ ಅಮಿತ್ ಶಾ

೩. ಫಿನ್ಲೆಂಡ್‌ನಲ್ಲಿ ಹೂಡಿಕೆ ಮಾಡುವಂತೆ ಭಾರತೀಯ ಕಂಪನಿಗಳಿಗೆ ಮುಕ್ತ ಆಹ್ವಾನ - ಫಿನ್ಲೆಂಡ್ ಅಧ್ಯಕ್ಷ ಅಲೆಕ್ಸಾಂಡರ್ ಸ್ಟಬ್

೪. ಆಲ್ ಇಂಗ್ಲೆಂಡ್ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್; ಸೆಮಿಫೈನಲ್‌ನಲ್ಲಿ ಭಾರತದ ಲಕ್ಷ್ಯಸೇನ್ ಸ್ಪರ್ಧೆ

೫. ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್ ಫೈನಲ್; ಪ್ರಶಸ್ತಿಗಾಗಿ ನಾಳೆ ಭಾರತ - ನ್ಯೂಜಿಲೆಂಡ್ ಹಣಾಹಣಿ

**<>><><*><><<>**

ಯಾವುದೇ ಪ್ರದೇಶದಲ್ಲಿ ವಾಯು ಸಂಪರ್ಕ ವಿಸ್ತರಣೆಯಾದಾಗ, ಅದು ಆ ಭಾಗದ ಸಮಗ್ರ ಅಭಿವೃದ್ಧಿಯ ವೇಗವನ್ನು ಹೆಚ್ಚಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ. ರಾಜಸ್ಥಾನದ ಕೋಟಾದಲ್ಲಿ ನೂತನ 'ಗ್ರೀನ್‌ಫೀಲ್ಡ್' ವಿಮಾನ ನಿಲ್ದಾಣದ ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ತಮ್ಮ ವಿಡಿಯೋ ಸಂದೇಶದಲ್ಲಿ ಪ್ರಧಾನಿ, ೨೦೧೪ರ ಮೊದಲು ಭಾರತದಲ್ಲಿ ಸುಮಾರು ೭೦ ವಿಮಾನ ನಿಲ್ದಾಣಗಳಿದ್ದವು, ಪ್ರಸ್ತುತ ಈ ಸಂಖ್ಯೆ ೧೬೦ಕ್ಕೂ ಅಧಿಕವಾಗಿದೆ. ವಿಮಾನ ನಿಲ್ದಾಣಗಳ ಅಭಿವೃದ್ಧಿಯು ಕೇವಲ ಸಂಪರ್ಕವನ್ನು ಸುಧಾರಿಸುವುದಲ್ಲದೆ, ಹತ್ತಿರದ ಪಟ್ಟಣ ಮತ್ತು ನಗರಗಳಲ್ಲಿ ಉದ್ಯಮ ಮತ್ತು ಪ್ರವಾಸೋದ್ಯಮಕ್ಕೆ ಹೆಚ್ಚಿನ ಪ್ರೋತ್ಸಾಹ ನೀಡುತ್ತದೆ ಎಂದು ಹೇಳಿದರು. ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಲೋಕಸಭಾಧ್ಯಕ್ಷ ಓಂ ಬಿರ್ಲಾ, ರಾಜಸ್ಥಾನದ ಹಾದೋಟಿ ಪ್ರದೇಶದ ಪ್ರಗತಿಗೆ ಈ ಯೋಜನೆಯು ನಿರ್ಣಾಯಕವಾಗಿದೆ. ಈ ಭಾಗ ಶೀಘ್ರದಲ್ಲೇ ಪ್ರಮುಖ ಕೈಗಾರಿಕಾ ಮತ್ತು ಸೇವಾ ವಲಯದ ಕೇಂದ್ರವಾಗಿ ರೂಪಾಂತರಗೊಳ್ಳಲಿದೆ ಎಂದು ತಿಳಿಸಿದರು. ಕೇಂದ್ರ ನಾಗರಿಕ ವಿಮಾನಯಾನ ಸಚಿವ ರಾಮ್ ಮೋಹನ್ ನಾಯ್ಡು ಮಾತನಾಡಿ, ಸುಮಾರು ಒಂದು ಸಾವಿರದ ೫೦೦ ಕೋಟಿ ರೂಪಾಯಿಗೂ ಅಧಿಕ ವೆಚ್ಚದಲ್ಲಿ ಕೈಗೊಳ್ಳಲಾಗುತ್ತಿರುವ ಈ ವಿಮಾನ ನಿಲ್ದಾಣದ ಕಾಮಗಾರಿಯು ಮುಂದಿನ ಎರಡು ವರ್ಷಗಳಲ್ಲಿ ಪೂರ್ಣಗೊಳ್ಳಲಿದೆ. ತಕ್ಷಣವೇ ವಿಮಾನ ಹಾರಾಟ ಕಾರ್ಯಾಚರಣೆಗಳು ಪ್ರಾರಂಭವಾಗಲಿವೆ ಎಂದು ಭರವಸೆ ನೀಡಿದರು.

**<>><><*><><<>**

ದೇಶಾದ್ಯಂತ ಅತಿಕ್ರಮಣ ಮತ್ತು ಒಳನುಸುಳುವಿಕೆ ವಿರುದ್ಧ ಕಠಿಣ ಕ್ರಮ ಮುಂದುವರೆದಿದೆ ಎಂದು ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಹೇಳಿದ್ದಾರೆ. ಉತ್ತರಾಖಂಡ್ ಸರ್ಕಾರ ನಾಲ್ಕು

ವರ್ಷಗಳನ್ನು ಪೂರೈಸಿದ ನೆನಪಿಗಾಗಿ ಹರಿದ್ವಾರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಚಿವರು ಭಾಗವಹಿಸಿದ್ದರು. ಈ ಸಂದರ್ಭದಲ್ಲಿ, ೧ ಸಾವಿರದ ೧೦೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಅಭಿವೃದ್ಧಿ ಯೋಜನೆಗಳನ್ನು ಸಚಿವರು ಉದ್ಘಾಟಿಸಿ, ಶಿಲಾನ್ಯಾಸ ನೆರವೇರಿಸಿದರು. ಪೌರತ್ವ ತಿದ್ದುಪಡಿ ಕಾಯ್ದೆಯನ್ನು ಉಲ್ಲೇಖಿಸಿದ ಸಚಿವರು, ಧಾರ್ಮಿಕ ಕಿರುಕುಳವನ್ನು ಎದುರಿಸಿ ನಂತರ ಭಾರತಕ್ಕೆ ಬಂದ ಜನರಿಗೆ ಪೌರತ್ವ ನೀಡಬೇಕು. ಹರಿದ್ವಾರದಲ್ಲಿ ಪಾಕಿಸ್ತಾನ ಮತ್ತು ಅಫ್ಘಾನಿಸ್ತಾನದಿಂದ ಸುಮಾರು ೨೦೦ ಜನರಿಗೆ ಪೌರತ್ವ ನೀಡಲಾಗಿದೆ ಎಂದು ತಿಳಿಸಿದರು. ಗಡಿ ಗ್ರಾಮಗಳನ್ನು ಅಭಿವೃದ್ಧಿಪಡಿಸಲು ಮತ್ತು ವಲಸೆಯನ್ನು ತಡೆಯಲು ವೈಬ್ರೆಂಟ್ ವಿಲೇಜ್ ಕಾರ್ಯಕ್ರಮವನ್ನು ಜಾರಿಗೆ ತರಲಾಗುತ್ತಿದೆ ಎಂದು ಕೇಂದ್ರ ಸಚಿವ ಅಮಿತ್ ಶಾ ಹೇಳಿದರು.

**<>><><*><><<>**

ಪಶ್ಚಿಮ ಬಂಗಾಳದ ಸಿಲಿಗುರಿಯಲ್ಲಿ ಆಯೋಜಿಸಲಾದ ೯ನೇ ಅಂತಾರಾಷ್ಟ್ರೀಯ ಸಂತಾಲ್ ಬುಡಕಟ್ಟು ಜನಾಂಗದ ಸಮಾವೇಶದಲ್ಲಿ ಶಿಷ್ಟಾಚಾರವನ್ನು ಪಾಲಿಸದೇ ಇರುವ ಕುರಿತು ಪಶ್ಚಿಮ ಬಂಗಾಳ ಸರ್ಕಾರದ ವಿರುದ್ಧ ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು, ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಯಾವುದೇ ರಾಜ್ಯಕ್ಕೆ ರಾಷ್ಟ್ರಪತಿ ಭೇಟಿಯ ವೇಳೆ, ಆ ರಾಜ್ಯದ ಮುಖ್ಯಮಂತ್ರಿ ಹಾಜರಿರಬೇಕು ಎಂಬುದನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಸಾರ್ವಜನಿಕ ಸಭೆಯಲ್ಲಿ ಹೇಳಿದರು. ಇದೇ ವೇಳೆ, ಅನೇಕ ಬುಡಕಟ್ಟು ಜನಾಂಗದವರು ಸಂತಾಲ್ ಸಮಾವೇಶದಲ್ಲಿ ಭಾಗವಹಿಸದಂತೆ ತಡೆಯಲಾಗಿದೆ ಎಂಬುದನ್ನು ಗಮನಿಸಿರುವುದಾಗಿ ಕೂಡ ರಾಷ್ಟ್ರಪತಿ ಹೇಳಿದರು. ಸಮಾವೇಶ ಆಯೋಜನೆಗಾಗಿ ಸೂಕ್ತ ಮತ್ತು ವಿಸ್ತಾರವಾದ ಸ್ಥಳಾವಕಾಶವನ್ನು ರಾಜ್ಯ ಸರ್ಕಾರ ಒದಗಿಸಲ್ಲ, ಅಲ್ಲದೆ, ರಾಜ್ಯ ಸರ್ಕಾರ ಸಿಬ್ಬಂದಿ ವರ್ಗ ಕೂಡ ಈ ಸಮಾವೇಶದಲ್ಲಿ ಪಾಲ್ಗೊಂಡಿಲ್ಲ ಎಂದು ರಾಷ್ಟ್ರಪತಿ ಅಸಮಾಧಾನ ವ್ಯಕ್ತಪಡಿಸಿದರು.

**<>><><*><><<>**

ಪ್ರಧಾನ ಮಂತ್ರಿ ಭಾರತೀಯ ಜನೌಷಧಿ ಯೋಜನೆಯ ಎಲ್ಲಾ ಫಲಾನುಭವಿಗಳಿಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಂದು ಜನೌಷಧಿ ದಿನದ ಶುಭಾಶಯ ಕೋರಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಈ ಉಪಕ್ರಮವು ದೇಶಾದ್ಯಂತ ಬಡವರಿಗೆ ಔಷಧಿಗಳ ಆರ್ಥಿಕ ಹೊರೆಯಿಂದ ಮುಕ್ತಿ ನೀಡಲು ಮತ್ತು ಜೆನೆರಿಕ್ ಔಷಧಿಗಳ ಬಗ್ಗೆ ಜಾಗೃತಿ ಮೂಡಿಸಲು ಸಹಾಯ ಮಾಡಿದೆ ಎಂದು ಹೇಳಿದ್ದಾರೆ. ಇಂದು ದೇಶದಲ್ಲಿರುವ ಸುಮಾರು ೧೮ ಸಾವಿರ ಜನೌಷಧಿ ಕೇಂದ್ರಗಳು ಬಡವರಿಗೆ ಕೈಗೆಟುಕುವ ಮತ್ತು ಸುಲಭವಾಗಿ ಲಭ್ಯವಿರುವ ಔಷಧಿಗಳನ್ನು ಒದಗಿಸುತ್ತಿವೆ. ಈ ಯೋಜನೆಯ ಮೂಲಕ ಸಾರ್ವಜನಿಕರು ಈಗಾಗಲೇ ೪೦ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ಉಳಿತಾಯ ಮಾಡಿದ್ದಾರೆ ಎಂದು ಅವರು ತಿಳಿಸಿದ್ದಾರೆ.

**<>><><*><><<>**

ಫಿನ್ಲೆಂಡ್‌ನಲ್ಲಿ ಹೂಡಿಕೆ ಮಾಡುವಂತೆ ಭಾರತೀಯ ಕಂಪನಿಗಳಿಗೆ ಫಿನ್ಲೆಂಡ್ ಅಧ್ಯಕ್ಷ ಅಲೆಕ್ಸಾಂಡರ್ ಸ್ಟಬ್ ಮುಕ್ತ ಆಹ್ವಾನ ನೀಡಿದ್ದಾರೆ. ಮುಂಬೈನಲ್ಲಿ ಇಂದು ನಡೆದ ಭಾರತ-ಫಿನ್ಲೆಂಡ್ ಉದ್ಯಮ ವೇದಿಕೆಯನ್ನುದ್ದೇಶಿಸಿ ಮಾತನಾಡಿದ ಅವರು, ಅಮೆರಿಕದ ಅಸ್ಥಿರ ವ್ಯಾಪಾರ ನೀತಿಗಳಿಂದಾಗಿ ಇಂದು ಜಗತ್ತಿನ ವಿವಿಧ ರಾಷ್ಟ್ರಗಳು ತಮ್ಮ ವ್ಯಾಪಾರ ಸಂಬಂಧಗಳನ್ನು ವಿಸ್ತರಿಸಿಕೊಳ್ಳುತ್ತಿವೆ ಎಂದರು. ಇದೇ ವೇಳೆ, ಕಳೆದ ಕೆಲವು ವರ್ಷಗಳಲ್ಲಿ ಭಾರತದಲ್ಲಿ ರಸ್ತೆ, ಕಟ್ಟಡ ಸೇರಿದಂತೆ ಮೂಲಸೌಕರ್ಯ ವ್ಯವಸ್ಥೆಗಳು ಗಣನೀಯವಾಗಿ ಸುಧಾರಿಸಿರುವ ಕುರಿತು ಶ್ಲಾಘನೆ ವ್ಯಕ್ತಪಡಿಸಿದರು. ಇದಕ್ಕೂ ಮುನ್ನ ಮುಂಬೈ ವಿಶ್ವವಿದ್ಯಾಲಯದಲ್ಲಿ ವಿದ್ಯಾರ್ಥಿಗಳು ಮತ್ತು ವಿದ್ವಾಂಸರನ್ನು ಉದ್ದೇಶಿಸಿ ಮಾತನಾಡಿದ ಅಧ್ಯಕ್ಷರು, ಉಭಯ ದೇಶಗಳ ಶೈಕ್ಷಣಿಕ ಮತ್ತು ಔದ್ಯೋಗಿಕ ಸಂಬಂಧಗಳ ಬಗ್ಗೆ ಚರ್ಚಿಸಿದರು.

<>><><*><><<>

ಅಂತಾರಾಷ್ಟ್ರೀಯ ಮಹಿಳಾ ದಿನದ ಮುನ್ನಾದಿನವಾದ ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು ದೇಶದ ಎಲ್ಲಾ ನಾಗರಿಕರಿಗೆ, ವಿಶೇಷವಾಗಿ ಮಹಿಳೆಯರಿಗೆ ಶುಭಾಶಯಗಳನ್ನು ಕೋರಿದ್ದಾರೆ. ಮಹಿಳೆಯರು ಸಮಾಜ ಮತ್ತು ರಾಷ್ಟ್ರದ ಅಡಿಪಾಯವಾಗಿದ್ದು, ವಿದ್ಯಾವಂತ, ಸ್ವಾವಲಂಬಿ ಮತ್ತು ಸಶಕ್ತ ಮಹಿಳೆಯರು, ಸಮೃದ್ಧ ಮತ್ತು ಪ್ರಗತಿಪರ ರಾಷ್ಟ್ರಕ್ಕೆ ಕೊಡುಗೆ ನೀಡಬಲ್ಲರು ಎಂದು ರಾಷ್ಟ್ರಪತಿಗಳು ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ. ಶಿಕ್ಷಣ, ವಿಜ್ಞಾನ, ಕ್ರೀಡೆ, ಕಲೆ ಮತ್ತು ರಕ್ಷಣೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಮಹಿಳೆಯರು ತಮ್ಮ ಪ್ರತಿಭೆ ಮತ್ತು ಕಠಿಣ ಪರಿಶ್ರಮವನ್ನು ಪ್ರದರ್ಶಿಸುತ್ತಿದ್ದಾರೆ. ಇಂದು ಯುವತಿಯರು ಹೊಸ ಭಾರತದ ಕನಸುಗಳನ್ನು ರೂಪಿಸುತ್ತಿದ್ದಾರೆ ಎಂದು ರಾಷ್ಟ್ರಪತಿ ತಿಳಿಸಿದರು. ಮಹಿಳೆಯರಿಗೆ ಸಮಾನ ಅವಕಾಶ ದೊರೆತು, ಅವರ ಸ್ವಂತ ಸಾಮರ್ಥ್ಯದ ಆಧಾರದ ಮೇಲೆ ಪ್ರಗತಿಪಥದಲ್ಲಿ ಮುಂದುವರೆದು, ಯಶಸ್ಸು ಸಾಧಿಸಲು ಪೂರಕ ಸಮಾಜ ನಿರ್ಮಾಣವಾಗಬೇಕಿದ್ದು, ಇದರ ಸಾಕಾರಕ್ಕಾಗಿ ಕೈಜೋಡಿಸುವಂತೆ ನಾಗರಿಕರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಕರೆ ನೀಡಿದ್ದಾರೆ.

<>><><*><><<>

ರಾಷ್ಟ್ರ ನಿರ್ಮಾಣದಲ್ಲಿ ಮಹಿಳೆಯರ ಮಹತ್ತರ ಪಾತ್ರದ ಕುರಿತು ಬೆಳಕು ಚೆಲ್ಲುವ ಕೇಂದ್ರ ಸಚಿವೆ ಅನ್ನಪೂರ್ಣ ದೇವಿ ಅವರು ಬರೆದ ಲೇಖನವನ್ನು ಪ್ರಧಾನಿ ನರೇಂದ್ರ ಮೋದಿ ಇಂದು ಹಂಚಿಕೊಂಡಿದ್ದಾರೆ. ಭಾರತದ ಪ್ರಗತಿಯ ಹಾದಿ, ಶ್ರೀಮಂತ ಐತಿಹಾಸಿಕ ಪರಂಪರೆಯ ಜೊತೆಗೆ ಮಹಿಳಾ ಬಲದಿಂದಲೂ ರೂಪಿತವಾಗಿದೆ ಎಂದು ಸಾಮಾಜಿಕ ಮಾಧ್ಯಮದಲ್ಲಿ ಪ್ರಧಾನಿ ಹೇಳಿದ್ದಾರೆ.

<>><><*><><<>

ಪಶ್ಚಿಮ ಏಷ್ಯಾದಲ್ಲಿನ ಸಂಘರ್ಷ ಮುಂದುವರಿದಿದ್ದು, ಅಮೆರಿಕ, ಇಸ್ರೇಲ್ ಮತ್ತು ಇರಾನ್ ನಡುವಿನ ಸರಣಿ ದಾಳಿಗಳಿಂದಾಗಿ ಪರಿಸ್ಥಿತಿ ತೀವ್ರ ಬಿಗಡಾಯಿಸಿದೆ. ಕಳೆದ ತಿಂಗಳ ಅಂತ್ಯದಲ್ಲಿ ಇರಾನ್‌ನ ಸರ್ವೋಚ್ಚ ನಾಯಕ ಆಯತೊಲ್ಲಾ ಅಲಿ ಖಮೇನಿ ಅವರ ಹತ್ಯೆಯ ನಂತರ ಉಂಟಾದ ಉದ್ವಿಗ್ನತೆಯು ಈಗ ಪೂರ್ಣಪ್ರಮಾಣದ ಪ್ರಾದೇಶಿಕ ಯುದ್ಧವಾಗಿ ಬದಲಾಗಿದೆ. ಇಸ್ರೇಲ್ ನಡೆಸಿದ ಇತ್ತೀಚಿನ ವೈಮಾನಿಕ ದಾಳಿಯಿಂದ ಟೆಹ್ರಾನ್‌ನ ಮೆಹ್ರಾಬಾದ್ ವಿಮಾನ ನಿಲ್ದಾಣಕ್ಕೆ ಹಾನಿಯಾಗಿದ್ದು, ಈವರೆಗಿನ ಸಂಘರ್ಷದಲ್ಲಿ ೧ ಸಾವಿರದ ೩೦೦ಕ್ಕೂ ಹೆಚ್ಚು ಇರಾನಿ ನಾಗರಿಕರು ಪ್ರಾಣ ಕಳೆದುಕೊಂಡಿದ್ದಾರೆ ಎಂದು ವರದಿಯಾಗಿದೆ. ಅಮೆರಿಕದ 'ಆಪರೇಷನ್ ಎಪಿಕ್ ಫ್ಯೂರಿ' ಅಡಿಯಲ್ಲಿ ಇರಾನ್‌ನ ಸುಮಾರು ೩ ಸಾವಿರ ಗುರಿಗಳ ಮೇಲೆ ದಾಳಿ ನಡೆಸಲಾಗಿದ್ದು, ಇಸ್ರೇಲ್‌ಗೆ ಅಮೆರಿಕವು ೧೫೧ ಮಿಲಿಯನ್ ಡಾಲರ್ ಮೊತ್ತದ ಶಸ್ತ್ರಾಸ್ತ್ರ ನೆರವನ್ನು ಘೋಷಿಸಿದೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಇರಾನ್ ಬೇಷರತ್ತಾಗಿ ಶರಣಾಗಬೇಕು ಎಂದು ಆಗ್ರಹಿಸಿದ್ದು, ಯಾವುದೇ ಸಂಧಾನದ ಸಾಧ್ಯತೆಯನ್ನು ತಳ್ಳಿಹಾಕಿದ್ದಾರೆ. ಇದಕ್ಕೆ ಪ್ರತಿಯಾಗಿ ಇರಾನ್ ಸೈನ್ಯವು ಜೋರ್ಡಾನ್‌ನಲ್ಲಿರುವ ಅಮೆರಿಕದ ಅತ್ಯಾಧುನಿಕ 'ಥಾಡ್' ರೇಡಾರ್ ವ್ಯವಸ್ಥೆಯನ್ನು ಧ್ವಂಸಗೊಳಿಸಿದೆ ಎಂದು ಹೇಳಲಾಗಿದೆ. ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರು ಇರಾನ್ ಅಧ್ಯಕ್ಷರೊಂದಿಗೆ ದೂರವಾಣಿ ಕರೆ ಮಾಡಿ, ತಕ್ಷಣವೇ ಸಂಘರ್ಷ ನಿಲ್ಲಿಸಲು ಮತ್ತು ರಾಜತಾಂತ್ರಿಕ ಪರಿಹಾರ ಕಂಡುಕೊಳ್ಳಲು ಮನವಿ ಮಾಡಿದ್ದಾರೆ. ಈ ಸಂಘರ್ಷದ ಬಿಸಿ ಲೆಬನಾನ್, ದುಬೈ ಮತ್ತು ಸೌದಿ ಅರೇಬಿಯಾದಂತಹ ನೆರೆಯ ರಾಷ್ಟ್ರಗಳಿಗೂ ಹರಡುತ್ತಿದ್ದು, ಜಾಗತಿಕ ಸುರಕ್ಷತೆ ಮತ್ತು ಇಂಧನ ಮೂಲಸೌಕರ್ಯಗಳಿಗೆ ಭಾರಿ ಬೆದರಿಕೆ ಉಂಟಾಗಿದೆ.

<>><><*><><<>

ಯಾವುದೇ ವ್ಯಾಪಾರ ಒಪ್ಪಂದಗಳಲ್ಲಿ ಪಾಲುದಾರರೊಂದಿಗೆ ಸೂಕ್ಷ್ಮ ವಿಷಯಗಳಲ್ಲಿ ಭಾರತ ರಾಜಿ ಮಾಡಿಕೊಂಡಿಲ್ಲ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ನವದೆಹಲಿಯಲ್ಲಿಂದು ನಡೆದ ರೈಸಿನಾ ಸಂವಾದ ೨೦೨೬ ರ ಮೂರನೇ ಮತ್ತು ಅಂತಿಮ ದಿನದಂದು ಪಾಲ್ಗೊಂಡು ಮಾತನಾಡಿದ ಸಚಿವರು, ಕೇಂದ್ರ ಸರ್ಕಾರ, ಎಲ್ಲಾ ವ್ಯಾಪಾರ ಒಪ್ಪಂದಗಳಲ್ಲಿ ರಾಷ್ಟ್ರೀಯ ಹಿತಾಸಕ್ತಿಗಳನ್ನು ರಕ್ಷಿಸಿದ್ದು, ಹೆಚ್ಚಿನ ಸಹಭಾಗಿತ್ವಕ್ಕೆ ಬಾಗಿಲು ತೆರೆಯಲಾಗಿದೆ ಎಂದು ಹೇಳಿದರು. ವ್ಯಾಪಾರ ಪಾಲುದಾರಿಕೆಗಳ ವಿಶ್ವವ್ಯಾಪಿ ಜಾಲವನ್ನು ರಚಿಸುವುದು ಭಾರತದ ವಿಧಾನವಾಗಿದೆ. ರೈಸಿನಾ ಸಂವಾದ ೨೦೨೬ ಭಾರತವನ್ನು ಹೆಮ್ಮೆಪಡುವಂತೆ ಮಾಡಿದ್ದು, ಜಾಗತಿಕ ವೇದಿಕೆಯಲ್ಲಿ ತನ್ನನ್ನು ತಾನು ಸ್ಥಾಪಿಸಿಕೊಳ್ಳುತ್ತಿದೆ ಎಂದು ಕೇಂದ್ರ ಸಚಿವ ಪಿಯೂಷ್ ಗೋಯಲ್ ತಿಳಿಸಿದರು.

**<>><><*><><<>**

ನೇಪಾಳದಲ್ಲಿ ಯಶಸ್ವಿಯಾಗಿ ಮತ್ತು ಶಾಂತಿಯುತವಾಗಿ ಚುನಾವಣೆಗಳು ನಡೆದಿರುವ ಹಿನ್ನೆಲೆಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ನೇಪಾಳದ ಜನತೆಗೆ ಮತ್ತು ಸರ್ಕಾರಕ್ಕೆ ಅಭಿನಂದನೆ ಸಲ್ಲಿಸಿದ್ದಾರೆ. ನೇಪಾಳದ ಮಿತ್ರರಾಷ್ಟ್ರ ಮತ್ತು ನೆರೆಯ ದೇಶವಾಗಿರುವ ಭಾರತ, ಅಲ್ಲಿನ ಜನತೆ ಹಾಗೂ ನೂತನ ಸರ್ಕಾರದೊಂದಿಗೆ ನಿಕಟವಾಗಿ ಸಹಕರಿಸಲು ಮತ್ತು ಶಾಂತಿ, ಪ್ರಗತಿ ಹಾಗೂ ಸಮೃದ್ಧಿಯನ್ನು ಹೊಸ ಎತ್ತರಕ್ಕೆ ಕೊಂಡೊಯ್ಯಲು ಸದಾ ಬದ್ಧವಾಗಿದೆ ಎಂದು ಪ್ರಧಾನಿ ತಿಳಿಸಿದ್ದಾರೆ.

**<>><><*><><<>**

ಬರ್ಮಿಂಗ್‌ಹ್ಯಾಮ್‌ನಲ್ಲಿ ನಡೆಯುತ್ತಿರುವ ಆಲ್ ಇಂಗ್ಲೆಂಡ್ ಮುಕ್ತ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್‌ನ, ಭಾರತದ ಲಕ್ಷ್ಯಸೇನ್ ಹಾಗೂ ಕೆನಡಾದ ವಿಕ್ಟರ್ ಲಾಯ್ ನಡುವಿನ ಸೆಮಿ ಫೈನಲ್ ಪಂದ್ಯ ಪ್ರಗತಿಯಲ್ಲಿದೆ. ಲಕ್ಷ್ಯಸೇನ್ ಟೂರ್ನಿಯಲ್ಲಿ ಉಳಿದಿರುವ ಭಾರತದ ಏಕೈಕ ಆಟಗಾರರಾಗಿದ್ದಾರೆ.

**<>><><*><><<>**

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಾಳೆ ನಡೆಯಲಿರುವ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ಫೈನಲ್ ಪಂದ್ಯದಲ್ಲಿ ಪ್ರಶಸ್ತಿಗಾಗಿ ಭಾರತ ಹಾಗೂ ನ್ಯೂಜಿಲೆಂಡ್ ತಂಡಗಳು ಸೆಣಸಲಿವೆ. ಪಂದ್ಯ ನಾಳೆ ಸಂಜೆ ೭ ಗಂಟೆಗೆ ಆರಂಭವಾಗಲಿದೆ. ಸೂರ್ಯಕುಮಾರ್ ಯಾದವ್ ನೇತೃತ್ವದ ಹಾಲಿ ಚಾಂಪಿಯನ್ ಭಾರತ ತಂಡ, ಸೆಮಿಫೈನಲ್‌ನಲ್ಲಿ ಇಂಗ್ಲೆಂಡ್ ವಿರುದ್ಧ ೭ ರನ್‌ಗಳ ರೋಚಕ ಜಯ ಸಾಧಿಸಿ, ಫೈನಲ್ ತಲುಪಿದೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><><ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ ><><<>**